16 NOV 2022

ಕರ್ನಾಟಕ ಸರ್ಕಾರ

ಇಡಿ 300 ಯುಎನ್ಇ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 14-11-2022.

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 1398
ದಿನಾಂಕ 15 NOV 2022

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು – 560 001.

ಇವರಿಗೆ:

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು 560 001
2. ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಎಲ್ಲಾ ಸರ್ಕಾರಿ / ಖಾಸಗಿ ವಿಶ್ವವಿದ್ಯಾಲಯಗಳ ಕುಲಸಚಿವರು
3. ಎಲ್ಲಾ ಸಂಯೋಜಿ ಕಾಲೇಜುಗಳಿಗೆ – ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳ ಮುಖಾಂತರ
4. ಸರ್ಕಾರಿ/ಅನುದಾನಿತ/ಅನುದಾನರಹಿತ ಕಾಲೇಜುಗಳ ಪ್ರಾಂಶುಪಾಲರಿಗೆ – ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಮುಖಾಂತರ

ಮಾನ್ಯರೆ,

ವಿಷಯ: 2022-23ನೇ ಸಾಲಿಗೆ ಪದವಿ ಪ್ರವೇಶಾತಿಗೆ ಕಾಲಾವಕಾಶ ವಿಸ್ತರಿಸುವ ಕುರಿತು.

ಉಲ್ಲೇಖ 1) ಸರ್ಕಾರದ ಪತ್ರ ಸಂ. ಇಡಿ 217 ಯುಎನ್ಇ 2022, ದಿನಾಂಕ:26-9-2022
2) ಸರ್ಕಾರದ ಪತ್ರ ಸಂ. ಇಡಿ 217 ಯುಎನ್ಇ 2022, ದಿನಾಂಕ:21-10-2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (1)ರ ಸರ್ಕಾರಿ ಪತ್ರದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) 2022-23ನೇ ಶೈಕ್ಷಣಿಕ ಸಾಲಿನ ಸ್ನಾತಕ ಕೋರ್ಸುಗಳ ಪ್ರವೇಶಾತಿಯನ್ನು ವಿದ್ಯಾರ್ಥಿಗಳ ಹಾಜರಾತಿ ಮತ್ತು ಸಾಮಾನ್ಯ ತರಗತಿಗಳಿಗೆ ಯಾವುದೇ ತೊಂದರೆಯಾಗದಂತೆ ದಿನಾಂಕ:30.09.2022ರವರೆಗೆ ಪ್ರವೇಶಾತಿಯನ್ನು ವಿಸ್ತರಿಸಲಾಗಿರುತ್ತದೆ.

ಮುಂದುವರೆದಂತೆ, ಉಲ್ಲೇಖಿತ (2)ರ ಸರ್ಕಾರದ ಪತ್ರದಲ್ಲಿ C.E.T. Counseling ತಡವಾಗಿರುವುದರಿಂದ, Counseling ಪೂರ್ಣಗೊಂಡ ನಂತರ ಕೆಲವೊಂದು ವಿದ್ಯಾರ್ಥಿಗಳು B.Sc. ಪದವಿಗೆ ಪ್ರವೇಶಾತಿ ಪಡೆಯುವ ಸಾಧ್ಯತೆ ಇರುವುದರಿಂದ ಹಾಗೂ ಹಾಲಿ B.Sc. ಪದವಿಗೆ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಯು ಕಡಿಮೆ ಆಗಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ಈಗಾಗಲೇ ಸಂಯೋಜನೆ ನೀಡಲಾದ B.Sc. ಪದವಿ ಕೋರ್ಸ್‌ಗಳಿಗೆ ಅನ್ವಯಿಸುವಂತೆ ಮಾತ್ರ ಪ್ರವೇಶಾತಿಗೆ ಕಾಲಾವಕಾಶವನ್ನು ದಿನಾಂಕ: 29-10-2022 ವರೆಗೆ ವಿಸ್ತರಿಸಲಾಗಿತ್ತು.

ಪ್ರಸ್ತುತ C.E.T. Counseling ಇನ್ನೂ ಪೂರ್ಣಗೊಳ್ಳದೇ ಇರುವುದರಿಂದ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ಈಗಾಗಲೇ ಸಂಯೋಜನೆ ನೀಡಲಾದ B.Sc. ಮತ್ತು BCA ಪದವಿ ಕೋರ್ಸ್‌ಗಳಿಗೆ

...2

ಅನ್ವಯಿಸುವಂತೆ ಮಾತ್ರ ಪ್ರವೇಶಾತಿಗೆ ಕಾಲಾವಕಾಶವನ್ನು ದಿನಾಂಕ:25.11.2022 ರವರೆಗೆ ವಿಸ್ತರಿಸಲಾಗಿದೆ.

ಮುಂದುವರೆದಂತೆ, ಕಮರ್ಷಿಯಲ್ ಪ್ರಾಕ್ಟೀಸ್ (ಕನ್ನಡ ಮತ್ತು ಇಂಗ್ಲೀಷ್) ನಾನ್-ಇಂಜಿನಿಯರಿಂಗ್ ಕೋರ್ಸಿನ ಪರೀಕ್ಷೆಯ ಫಲಿತಾಂಶವು ದಿನಾಂಕ:14.10.2022ರಂದು ಪ್ರಕಟವಾಗಿದ್ದು, ಲ್ಯಾಟರಲ್ ಎಂಟ್ರಿ 2ನೇ ವರ್ಷ/3ನೇ ಸೆಮಿಸ್ಟರ್ ಪದವಿ ಕೋರ್ಸಿಗೆ ಪ್ರವೇಶ ದಿನಾಂಕವು ಅಂತಿಮಗೊಂಡಿರುವುದರಿಂದ, ಸದರಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳು ಪ್ರವೇಶಾತಿಯನ್ನು ನಿರಾಕರಿಸುತ್ತಿದ್ದು, ಇದರಿಂದಾಗಿ ಮುಂದಿನ ವ್ಯಾಸಂಗವನ್ನು ಮುಂದುವರೆಸಲು ವಂಚಿತರಾಗುತ್ತಿರುವುದು ಕಂಡು ಬಂದ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ಈಗಾಗಲೇ ಸಂಯೋಜನೆ ನೀಡಲಾದ B.Com/BBA/BBM ಪದವಿ ಕೋರ್ಸ್‌ಗಳಿಗೆ ಅನ್ವಯಿಸುವಂತೆ ಮಾತ್ರ, ಕಮರ್ಷಿಯಲ್ ಪ್ರಾಕ್ಟೀಸ್ (ಕನ್ನಡ ಮತ್ತು ಇಂಗ್ಲೀಷ್) ನಾನ್-ಇಂಜಿನಿಯರಿಂಗ್ ಕೋರ್ಸಿನ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷ / 3ನೇ ಸೆಮಿಸ್ಟರ್ B.Com/BBA/BBM ಪದವಿ ಕೋರ್ಸಿನ ಪ್ರವೇಶಾತಿ ಕಾಲಾವಕಾಶವನ್ನು ದಿನಾಂಕ:25.11.2022 ರವರೆಗೆ ವಿಸ್ತರಿಸಲಾಗಿದೆ.

ಈ ಮೇಲ್ಕಂಡ ಪ್ರವೇಶಾತಿ ವಿಸ್ತರಣೆಯು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ:

- ಅಸ್ತಿತ್ವದಲ್ಲಿರುವ ತರಗತಿಗಳು ಮತ್ತು ಕೋರ್ಸ್‌ಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು.
- ತರಗತಿಗಳು, ಪ್ರಾಯೋಗಿಕ ಪರೀಕ್ಷೆ, ಅಥವಾ ಲಿಖಿತ ಪರೀಕ್ಷೆಗಳನ್ನು ಬದಲಾಯಿಸುವಂತಿಲ್ಲ ಮತ್ತು ಮುಂದೂಡುವುವಂತಿಲ್ಲ. ಉನ್ನತ ಶಿಕ್ಷಣ ಇಲಾಖೆಯು ಹೊರಡಿಸಿರುವ ವೇಳಾಪಟ್ಟಿಯನ್ನಯ ಕಟ್ಟುನಿಟ್ಟಾಗಿ ಅನುಸರಿಸ ತಕ್ಕದ್ದು.
- ಅಸ್ತಿತ್ವದಲ್ಲಿರುವ ಯಾವುದೇ ಕೋರ್ಸ್‌ಗಳಿಗೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು.

ತಮ್ಮ ನಂಬುಗೆಯ,

Sheetal. M Hiremath

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

14/11/2022

<u>ಕಾಲೇಜು ಶಿಕ್ಷಣ ಇಲಾಖೆ</u>

ಸಂಖ್ಯೆ: ಕಾಶಿಇ/ಶೈವಿ/36/ಪ್ರವೇಶಾತಿ.ಮಾರ್ಗಸೂಚಿ/2022-23 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:21.11.2022

ಸರ್ಕಾರದ ಪತ್ರಸಂಖ್ಯೆ: ಇಡಿ 300 ಯುಎನ್ಇ 2022, ದಿನಾಂಕ:14.11.2022 ರಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ ಅನುದಾನರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) 2022-23ನೇ ಶೈಕ್ಷಣಿಕ ಸಾಲಿನ ಸ್ನಾತಕ ಕೋರ್ಸುಗಳ ಪ್ರವೇಶಾತಿಯನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ದಿನಾಂಕ:25.11.2022 ರವರೆಗೆ ವಿಸ್ತರಿಸಲಾಗಿದ್ದು, ಸದರಿ ಸರ್ಕಾರದ ಪತ್ರವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

<u>ಪ್ರತಿಯನ್ನು:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು - 560 001.
2. ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.